**ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಗ್ರೂಪ್-ಡಿ ನೌಕರರ ನೇಮಕಾತಿ ಪ್ರಾಧಿಕಾರ, ಬೆಳಗಾವಿ ಜಿಲ್ಲೆ**

**"ಅಡುಗೆ ಸಹಾಯಕರ ಹುದ್ದೆ ನೇಮಕಾತಿ ಸಂಬಂಧ ಪ್ರಾಯೋಗಿಕ ಪರೀಕ್ಷೆ ಹಾಜರಾತಿ ಪತ್ರ"**

Application ID No:
Candidate Name:
Address:

Passport Size Photo

ಮಾನ್ಯರೆ,

ವಿಷಯ:- ಅಡುಗೆ ಸಹಾಯಕರ ಹುದ್ದೆ ನೇಮಕಾತಿ ಸಂಬಂಧ ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗುವ ಕುರಿತು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರವ ಅಡುಗೆ ಸಹಾಯಕರ ಹುದ್ದೆಗೆ, ನೀವು ಎಸ್.ಎಸ್.ಎಲ್.ಸಿ/ತತ್ಸಮಾನ್ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳ ಜೇಷ್ಠತೆ/ಪ್ರವರ್ಗವಾರು/ಮೀಸಲಾತಿ ಆಧಾರದ ಮೇಲೆ ನಿಮ್ಮನ್ನು ದಾಖಲಾತಿ ಪರಿಶೀಲನೆಗಾಗಿ ಆಹ್ವಾನಿಸಿದ್ದು, ದಾಖಲಾತಿ ಪರಿಶೀಲನೆಯ ಸಂದರ್ಭದಲ್ಲಿ ಅಗತ್ಯ ದಾಖಲಾತಿಗಳನ್ನು ಸಲ್ಲಿಸಿರುವುದರಿಂದ, ದಿನಾಂಕ: 04-07-2017 ರಂದು ನಡೆಯುವ ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ ಆಹ್ವಾನಿಸಲಾಗಿದೆ. ಸದರಿ ದಿನದಂದು ಬೆಳಿಗ್ಗೆ 9.30 ಗಂಟೆಯಿಂದ ಸಂಜೆ 6.00 ಗಂಟೆಯ ವರೆಗೆ ಬೆಳಗಾವಿ ನಗರದಲ್ಲಿರುವ ಡಿ.ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ ಅಜಂ ನಗರ, ರಾಯಲ್ ಐ.ಟಿ.ಐ ಪಕ್ಕದಲ್ಲಿ, ಬಾಕ್ಸೈಡ್ ರೋಡ್, ಬೆಳಗಾವಿ ನಗರ, ಬೆಳಗಾವಿ ಸ್ಥಳದಲ್ಲಿ ಈ ಕೆಳಕಂಡ ದಾಖಲಾತಿಗಳೊಂದಿಗೆ ಬೆಳಿಗ್ಗೆ 9.30 ಕ್ಕೆ ತಪ್ಪದೇ ಹಾಜರಾಗಲು ಸೂಚಿಸಲಾಗಿದೆ.

1. ಆನ್ ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.
2. ದಾಖಲಾತಿ ಪರಿಶೀಲನೆ ಹಾಜರಾತಿ ಸೂಚನಾ ಪ್ರತಿ.
3. ಪ್ರಾಯೋಗಿಕ ಪರೀಕ್ಷೆಗೆ ಅರ್ಹರಾಗಿರುವ ಬಗ್ಗೆ Download ಮಾಡಿಕೊಳ್ಳಲಾದ ಹಾಜರಾತಿ ಪತ್ರ.

ಸೂಚನೆಗಳು:-

1. ಅಭ್ಯರ್ಥಿಗಳನ್ನು ದಾಖಲಾತಿ ಪರಿಶೀಲನೆ ನಂತರ ಪ್ರಾಯೋಗಿಕ ಪರೀಕ್ಷೆಗೆ ಅವರು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಜೇಷ್ಠತೆ ಆಧಾರದ ಮೇಲೆ ಪ್ರವರ್ಗವಾರು/ಮೀಸಲಾತಿ ಅನುಸಾರ 1:3 ಅನುಪಾತದಲ್ಲಿ ಆಹ್ವಾನಿಸಲಾಗಿದೆ.
2. ಇದು ಪ್ರಾಯೋಗಿಕ ಪರೀಕ್ಷೆ ಹಾಜರಾತಿ ಪತ್ರವಾಗಿದ್ದು, ಇದರ ಆಧಾರದ ಮೇಲೆ ಅಭ್ಯರ್ಥಿಯು ಹುದ್ದೆಯನ್ನು ಕೋರುವ ಹಕ್ಕು ಹೊಂದಿರುವುದಿಲ್ಲ. ಹುದ್ದೆಗಳ ನೇಮಕಾತಿಯು ಅಭ್ಯರ್ಥಿಯು ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಯಲ್ಲಿ ಹೊಂದುವ ಅರ್ಹತೆ ಮತ್ತು ಎಸ್.ಎಸ್.ಎಲ್.ಸಿ ಯಲ್ಲಿ ಪಡೆದ ಅಂಕಗಳ ಜೇಷ್ಠತೆಯನ್ನು ಆಧರಿಸಿರುತ್ತದೆ.
3. ಪ್ರಾಯೋಗಿಕ ಪರೀಕ್ಷೆಗೆ ಹಾಜರಾತಿ ಪತ್ರವನ್ನು ಮತ್ತೊಮ್ಮೆ ಕಳುಹಿಸಲಾಗುವುದಿಲ್ಲ. ನಿಗಧಿಪಡಿಸಿದ ದಿನಾಂಕದಂದು ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗದಿದ್ದಲ್ಲಿ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು.
4. ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗಲು ಪ್ರಯಾಣ/ದಿನಬತ್ಯೆ ನೀಡಲಾಗುವುದಿಲ್ಲ.
5. ನೇಮಕಾತಿ ಬಗ್ಗೆ ಯಾವುದೇ ರೀತಿಯ ಅನಧಿಕೃತ ಚಟುವಟಿಕೆಗಳಿಗೆ ಆಸ್ಪದವಿರುವುದಿಲ್ಲ. ಈ ರೀತಿ ಪ್ರಯತ್ನಿಸುವವರ ಅಭ್ಯರ್ಥಿತನವನ್ನು ರದ್ದುಗೊಳಿಸಲಾಗುವುದು.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಜಿಲ್ಲಾ ಮಟ್ಟದ ಗ್ರೂಪ್-ಡಿ ನೌಕರರ
ನೇಮಕಾತಿ ಪ್ರಾಧಿಕಾರ, ಬೆಳಗಾವಿ ಜಿಲ್ಲೆ